ಪ್ರ-330 (101)

**ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರ ನಿಯಮ-330ಕ್ಕೆ ಉತ್ತರ ಒದಗಿಸುವ ಕುರಿತು.**

**ವಿಷಯ:**

ರಾಜ್ಯದಲ್ಲಿ ಉತ್ತಮವಾಗಿ ನಡೆಯುತ್ತಿರುವ ಅನುದಾನಿತ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ದಿನಾಂಕ:01.01.2016 ರಿಂದ ಪ್ರಸ್ತುತ ಅವಧಿವರೆಗೆ ನಿವೃತ್ತಿ, ಮರಣ, ರಾಜೀನಾಮೆ ಇತ್ಯಾದಿ ಕಾರಣಗಳಿಂದ ಹಲವಾರು ಹುದ್ದೆಗಳು ಖಾಲಿ ಇದ್ದು, ಸದರಿ ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡದೆ ಇರುವುದರಿಂದ ಸದರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತುಂಬಾ ತೊಂದರೆಯಾಗುತ್ತಿದೆ. ಸದರಿ ಖಾಲಿ ಹುದ್ದೆಗಳಲ್ಲಿ ವಯೋಮಿತಿ ಮೀರಿರುವ ಹಲವಾರು ಶಿಕ್ಷಕರು ಅನುದಾನಕ್ಕೊಳಪಡಿಸಬಹುದೆಂಬ ಆಸೆಯಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಆದ್ದರಿಂದ ದಿನಾಂಕ:01.01.2016 ರಿಂದ ಪ್ರಸ್ತುತ ಸಾಲಿನವರೆಗೆ ನಿವೃತ್ತಿ, ರಾಜಿನಾಮೆ, ಹಾಗೂ ಇತರೆ ಕಾರಣಗಳಿಂದ ಖಾಲಿ ಆಗಿರುವ ಹುದ್ದೆಗಳನ್ನು ವೇತನಾನುದಾನಕ್ಕೊಳಪಡಿಸಬೇಕೆಂಬ ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸಲಾಗಿದೆ.

**ಉತ್ತರ:**

ರಾಜ್ಯದ ಅನುದಾನಿತ ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ದಿ:31.12.2015ರ ಅಂತ್ಯಕ್ಕೆ ರಾಜೀನಾಮೆ, ನಿವೃತ್ತಿ, ಮರಣ ಮತ್ತು ಇತರೆ ಕಾರಣಗಳಿಂದ ಖಾಲಿಯಾದ ಬೋಧಕ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳುವ ಬಗ್ಗೆ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 459 ವೆಚ್ಚ-8/2021ದಿ:23.02.2021 ಟಿಪ್ಪಣಿಯಲ್ಲಿ (ಜೂನ್ ಅಥವಾ ಜುಲೈ 2021) 2021-22ನೇ ಶೈಕ್ಷಣಿಕ ವರ್ಷ ಪ್ರಾರಂಭಗೊಂಡ ನಂತರ ಪದವಿ ಪೂರ್ವ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಬರುವ 173 ಬೋಧಕ ಹುದ್ದೆಗಳು ಹಾಗೂ ಪ್ರೌಢಶಾಲೆಯ 257 ಬೋಧಕ ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲು ಸಹಮತಿಸಿದೆ.

ಕೋವಿಡ್-19 ಹಿನ್ನೆಲೆಯಲ್ಲಿ ದಿನಾಂಕ:01.01.2016 ರಿಂದ ಪ್ರಸ್ತುತ ಸಾಲಿನವರೆಗೆ ಮರಣ, ನಿವೃತ್ತಿ, ಮತ್ತು ರಾಜಿನಾಮೆ ಇತ್ಯಾದಿ ಕಾರಣಗಳಿಂದ ಖಾಲಿಯಾದ ಹುದ್ದೆಗಳನ್ನು ನೇಮಕ ಮಾಡಲು ಆರ್ಥಿಕ ಇಲಾಖೆ ಸಹಮತಿಸಿರುವುದಿಲ್ಲ.

ಸಂಖ್ಯೆ:ಇಪಿ 153 ಎಸ್‌ಇಎಸ್ 2021

(ಎಸ್.ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು